197 (64) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ)
ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಕರ್ನಾಟಕ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಇದರಿಂದ ಸರ್ಕಾರಕ್ಕೆ ನಷ್ಟವುಂಟಾಗುತ್ತಿಲ್ಲವೇ;

ಇ. ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು)

ಅ. ಅಕ್ರಮ ಗಣಿಗಾರಿಕೆಯ ಬಗ್ಗೆ ದೂರುಗಳು ಹಾಗೂ ಕೆಲವು ಪ್ರಕರಣಗಳು ಗಮನಕ್ಕೆ ಬಂದಿದ್ದು, ಅದರ ಮೇಲೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಆ. ಅಕ್ರಮ ಗಣಿಗಾರಿಕೆಯಿಂದ ಸರ್ಕಾರಕ್ಕೆ ಆಗುವ ನಷ್ಟವನ್ನು ತಪ್ಪಿಸಲು ಅಗತ್ಯವಾದ ಕ್ರಮವನ್ನು ಕೈಗೊಳ್ಳಲಾಗುತ್ತಿದೆ.

ಇ. ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಈ ಕೆಳಕಂಡ ಕ್ರಮ ಕೈಗೊಳ್ಳಲಾಗುತ್ತಿದೆ.

ಅನಧಿಕೃತ ಗಣಿಗಾರಿಕೆಯಲ್ಲಿ ತೊಡಗಿರುವವರ ಮೇಲೆ ನೋಟಿಸ್ ಜಾರಿ ಮಾಡಿ, ನ್ಯಾಯಲಯದಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಅನಧಿಕೃತ ಖನಿಜ ಸಾಗಾಣಿಕೆ, ನಿಗದಿಪಡಿಸಿದ ತೂಕಕ್ಕಿಂದ ಹೆಚ್ಚಿನ ಸಾಗಾಣಿಕೆ ಅಥವಾ ಪರವಾನಿಗೆ ಅವಧಿ ಮುಗಿದ ನಂತರ ಸಾಗಾಣಿಕೆ ಮಾಡುವವರ ವಿರುದ್ಧ ಕಾನೂನು ಪ್ರಕಾರ ರೂ.25,000.00 ವರೆಗೆ ದಂಡ ವಿಧಿಸಲಾಗುತ್ತಿದೆ. ಇದುವರೆಗೂ ರಾಜ್ಯದಾದ್ಯಂತ 2005–06ನೇ ಸಾಲಿನಲ್ಲಿ 1053 ಪ್ರಕಠಣಗಳನ್ನು ಗುರುತಿಸಿ 265 ಪ್ರಕರಣಗಳಲ್ಲಿ ದೂರು ದಾಖಲಿಸಲಾಗಿದೆ. 688 ಪ್ರಕರಣಗಳಲ್ಲಿ ದಂಡ ವಿಧಿಸಿ ರೂ.3.36 ಕೋಟಿ ದಂಡ ಸಂಗ್ರಹಿಸಲಾಗಿದೆ.

ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ದಿನಾಂಕ 16.11.2005ರ ಸರ್ಕಾರಿ ಆದೇಶ ಸಂಖ್ಯೆ: ಸಿಐ 194: ಎಂಎಂಎಂ. 2005 ರಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿಗಳನ್ನು ರಚಿಸಲಾಗಿದೆ. ಈ ಸಮಿತಿಯಲ್ಲಿ ಅರಣ್ಯ, ಕಂದಾಯ, ಸಾರಿಗೆ, ಪೋಲೀಸ್, ಮಾಲಿನ್ಯ ನಿಯಂತ್ರಣ ಮಂಡಳಿ, ಇಂಡಿಯನ್ ಬ್ಯೂರೋ ಆಫ್ ಮೈನ್ಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿದ್ದು, ಅವಧಿಕೃತ ಗಣಿಗಾರಿಕೆಯನ್ನು ಗುರ್ತಿಸಿ,

ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ. ಹೆಚ್ಚು ಖನಿಜ ಸಾಗಾಣಿಕೆಯಾಗುತ್ತಿರುವ ರಸ್ತೆಗಳಲ್ಲಿ ತನಿಖಾ ಠಾಣೆಗಳನ್ನೂ ನಿರ್ಮಿಸಲಾಗುತ್ತಿದೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ, ಸಾರಿಗೆ ಇಲಾಖೆ, ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಗಳು ರಸ್ತೆಗಳಲ್ಲಿ ವಾಹನಗಳನ್ನು ತಪಾಸಣೆ ಮಾಡಿ ಅಕ್ರಮ ಸಾಗಾಣಿಕೆ ತಡೆಗಟ್ಟಲು ಕ್ರಮ ಕೈಗೊಳ್ಳುತ್ತಿವೆ. ಅಲ್ಲದೆ, ಈ ರೀತಿ ಅನಧಿಕೃತ ಗಣಿಗಾರಿಕೆ ತಡೆಗಟ್ಟಲು ಜಿಲ್ಲಾ ಪೋಲೀಸ್ ಇಲಾಖೆಯ ಸಹಕಾರದೊಂದಿಗೆ ತಪಾಸಣೆ ಮಾಡಿ, ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಕಂಡುಬಂದಲ್ಲಿ ಅಂಥವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಂಡು, ದಂಡ ವಿಧಿಸಲಾಗುತ್ತಿದೆ. ಹಾಗೂ ರಾತ್ರಿ ಕಾವಲು ಪಹರೆಯನ್ನು ನೇಮಿಸಿ ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಕಾರ್ಯ ನಿರ್ವಹಿಸಲಾಗುತ್ತಿದೆ.

198 (65) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ)

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಸಂತೇಮರಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 2005–06ನೇ ಸಾಲಿನಲ್ಲಿ 5054 ಅಡಿಯಲ್ಲಿ ನಡೆದಿರುವ ಕಾಮಗಾರಿಗಳೆಷ್ಟು; (ಕಾಮಗಾರಿವಾರು ವಿವರಗಳನ್ನು ನೀಡುವುದು);

ಆ. ಕಾಮಗಾರಿಗಳನ್ನು ತೆಗೆದುಕೊಳ್ಳದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮಾನ್ಯ ಮುಖ್ಯ ಮಂತ್ರಿಗಳು)

ಅ. ಸಂತೇಮರಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 2005–06ನೇ ಸಾಲಿನಲ್ಲಿ 5054 ಅಡಿಯಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಖ್ಯೆ 5 ಆಗಿರುತ್ತದೆ. ಕಾಮಗಾರಿಗಳ ವಿವರಗಳು ಈ ಕೆಳಕಂಡಂತಿರುತ್ತದೆ.

1. ನಂಜನಗೂಡು ತಾಲ್ಲೂಕು ಕಡುಬಿನ ಕಟ್ಟೆಯಿಂದ ಕುರುಹಟ್ಟಿ ಮಾರ್ಗ ಹೆಮ್ಮರಗಾಲ ಸೇರುವ ರಸ್ತೆ ಸರಪಳಿ 5.3 ರಿಂದ 8.30 ಕಿ.ಮೀವರೆಗೆ ಡಾಂಬರೀಕರಣ ಕಾಮಗಾರಿ–ಅಂದಾಜು ಮೊತ್ತ ರೂ.20.000ಲಕ್ಷ.

2. ನಂಜಗೂಡು ತಾಲ್ಲೂಕು ದೊಡ್ಡ ಕೌಲಂದೆಯಿಂದ ಬಾಗಲಕೋಟೆ ಬಿಳಿರಂಗನಬೆಟ್ಟ ರಸ್ತೆಯ ಸರಪಳಿ 0.00 ರಿಂದ 3.00 ಕಿಮೀ.ವರೆಗೆ ಡಾಂಬರೀಕರಣ ಕಾಮಗಾರಿ–ಅಂದಾಜು ಮೊತ್ತ ರೂ.25.00 ಲಕ್ಷ.